## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಫಾರ್ಚ್ಯೂನ್ 5 ವಿಂಡ್ ಎನರ್ಜಿ (ಕರ್ನಾಟಕ) ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1 ಸರ್ಕಾರದ ಪತ್ರ ಸಂಖ್ಯೆ: ಇಎನ್ 81 ಎನ್‌ಸಿಇ 2015 ದಿನಾಂಕ: 10.08.2015
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KRED/08/F5WE(K) PL-20 MW/1194 F ದಿನಾಂಕ:26.11.2014.

* * *

**ಪ್ರಸ್ತಾವನೆ :-**

ದಿನಾಂಕ: 16.04.2015 ರಂದು ನಡೆದ ಹಂಚಿಕೆ ಸಮಿತಿಯ ನಿರ್ಣಯದಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಮೆ: ಫಾರ್ಚ್ಯೂನ್ 5 ವಿಂಡ್ ಎನರ್ಜಿ (ಕರ್ನಾಟಕ) ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ನರೇಗಲ್, ಜಂಪುರ ಮತ್ತು ಕುಚಾಲ್‌ಪುರ್ ಗ್ರಾಮಗಳಲ್ಲಿ 20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು 2 ವರ್ಷದ ಒಳಗಾಗಿ ಡಿಪಿಆರ್ ಸಲ್ಲಿಸುವ ಷರತ್ತಿಗೊಳಪಟ್ಟು ಸರ್ಕಾರದಿಂದ ತತ್ವಶಃ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ಏಕ ಕಡತ ಪದ್ಧತಿಯಡಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು ಇವರು ಮೆ: ಫಾರ್ಚ್ಯೂನ್ 5 ವಿಂಡ್ ಎನರ್ಜಿ (ಕರ್ನಾಟಕ) ಪ್ರೈವೇಟ್ ಲಿಮಿಟೆಡ್, ಬೆಂಗಳೂರು ಇವರು ತಮ್ಮ ಕಂಪನಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ವಿವಿಧ ಪ್ರದೇಶಗಳಲ್ಲಿ ತತ್ವಶಃ ಹಂಚಿಕೆಯಾಗಿರುವ 20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನಾ ಪ್ರದೇಶವು ಖಾಸಗಿ / ಕಂದಾಯ ಭೂಮಿಯಾಗಿದ್ದು, ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡುವುದಾಗಿ ತಿಳಿಸಿ, ಸಲ್ಲಿಸಿರುವ ಡಿಪಿಆರ್ ಅನ್ನು ಪರಿಗಣಿಸಿ, ಹಂಚಿಕೆ ಆದೇಶವನ್ನು ನೀಡಬಹುದೆಂದು ಶಿಫಾರಸ್ಸು ಮಾಡಿ, ಸದರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 13 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ : 18.01.2016**

MD KREDL

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, ಮೆ: ಫಾರ್ಚ್ಯೂನ್ 5 ವಿಂಡ್ ಎನರ್ಜಿ (ಕರ್ನಾಟಕ) ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ನರೇಗಲ್, ಜಂಪುರ ಮತ್ತು ಕುಚಾಲ್‌ಪುರ್ ಗ್ರಾಮಗಳಲ್ಲಿ 20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು **ಹಂಚಿಕೆ** ಮಾಡಿ ಆದೇಶಿಸಲಾಗಿದೆ.



Wind Section
Inward No. 103
Date: 27-01-16
Sig

Geographical area description for 20 MW capacity wind power project

| Sl. No. | Toposheet No. | Proposed Enhaced capacity in MW | Near by villages of the proposed area and district | Geographical Area Details of the Project |
|---|---|---|---|---|
| 1 | 48 M/14 | 20 MW (10 Nos x 2000 kW) | Naregal, Jampur, & Kuchalpur of Ron Taluk, Gadag District. | The identified area is covered by Private land. The road crossing towards Naregal to Gadag and Ron to Kot Umachigi and area is covered in the following Geographical co-ordinates as:<br>**Latitude:** 15°31'3.9"- 15°35'00" N<br>**Longitude:** 75°45'0"- 77°50'0" E<br>**peaks:** 630, 628, 646, 651, 646 & 645 m Amsl |
| | Total | 20 MW | | |

ಷರತ್ತುಗಳು:-

1 ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಅಭಿವೃದ್ಧಿದಾರರು ದಿನಾಂಕ: 10.8.2015 ರಿಂದ ಜಾರಿಗೆ ಬರುವಂತೆ ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

3 ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮ್‌ನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4 ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

5 ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ / ಸ್ಥಳೀಯ ಸಂಸ್ಥೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.

6 ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ / ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಆಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.

7 ಸರ್ಕಾರದ 2014-19 ರ ಕೈಗಾರಿಕಾ ನೀತಿಯಲ್ಲಿ ನಮೂದಿಸಿರುವ ವಿನಾಯಿತಿ / ಸೌಲಭ್ಯಗಳು ಈ ಯೋಜನೆಗೆ ಅನ್ವಯಿಸುತ್ತವೆ.

8 ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

9 ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

10 ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.

11 ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 109 [illegible] ಪಡೆದುಕೊಂಡು ಭೂಪರಿವರ್ತನೆಯಾದ [illegible] ಮಾಡಿಕೊಳ್ಳತಕ್ಕದ್ದು.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

18/01

ಇವರಿಗೆ:

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.
2. ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001
3. ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ವಿಕಾಸ ಸೌಧ, ಬೆಂಗಳೂರು–1.
5. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು–9.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು–1.
8. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ.
9. ಜಿಲ್ಲಾಧಿಕಾರಿ, ಗದಗ ಜಿಲ್ಲೆ, ಗದಗ
10. ಉಪ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಪ್ರಾದೇಶಿಕ ವಿಭಾಗ, ಗದಗ.
11. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
12. M/s Fortune 5 Wind Energy (Karnataka) Pvt. Ltd., No. 25/1, Residency Road, Bangalore-560 025.
13. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
14. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
15. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.